ಶ್ರೀ ಹೆಚ್. ಹಾಲಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):

ಅ) ಇಲ್ಲ.

ಆ) ಇಲ್ಲ.

ಇ) ಹೌದು.

895 ಶ್ರೀ ಯು.ಟಿ. ಖಾದರ್ (ಮಂಗಳೂರು): ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿನ ಅಡಿಕೆ ಬೆಳೆಗಾರರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅಡಿಕೆ ಬೆಳೆಗೆ ಸರ್ಕಾರ ಬೆಂಬಲ ಬೆಲೆಯನ್ನು ನಿಗದಿಪಡಿಸುವುದೇ;

ಇ) ಕೇಂದ್ರ ಸರ್ಕಾರದಿಂದ ಅಡಿಕೆ ಬೆಳೆಗೆ ಸಹಾಯ ದೊರಕುತ್ತಿರುವುದೇ; (ವಿವರ ನೀಡುವುದು)?

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಹೌದು.

ಆ) ಎಫ್.ಎ.ಕ್ಯೂ. ಗುಣಮಟ್ಟದ ಕೆಂಪು ಪ್ರಬೇದದ ಅಡಿಕೆಗೆ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಬೆಂಬಲ ಬೆಲೆ ಪ್ರತಿ ಕ್ವಿಂಟಾಲ್‌ಗೆ ರೂ. 8,900/–ಕ್ಕೆ ರಾಜ್ಯ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ ರೂ. 600/–ರಂತೆ ಪ್ರೋತ್ಸಾಹ ಧನವನ್ನೊಳಗೊಂಡಂತೆ ಒಟ್ಟು ಪ್ರತಿ ಕ್ವಿಂಟಾಲ್‌ಗೆ ರೂ. 9,500/–ರಂತೆ ಬೆಂಬಲ ಬೆಲೆಯನ್ನು ನಿಗದಿಪಡಿಸಲಾಗಿದೆ. ಹಾಗೂ ದಿ: 30.6.09ರವರೆಗೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿಯಲ್ಲಿ ಕೆಂಪು ಅಡಿಕೆಯನ್ನು ಖರೀದಿಸಲು ಸರ್ಕಾರವು ಆದೇಶಿಸಿರುತ್ತದೆ.

ಎಫ್.ಎ.ಕ್ಯೂ. ಗುಣಮಟ್ಟದ ಬಿಳಿ (ಚಾಲಿ) ಪ್ರಬೇದದ ಅಡಿಕೆಗೆ ರಾಜ್ಯ ಸರ್ಕಾರದ ಪ್ರಸ್ತಾವನೆ ಮೇರೆಗೆ ಪ್ರತಿ ಕ್ವಿಗೆ ರೂ. 8900/– ಗಳಂತೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಖರೀದಿಸಲು ಕೇಂದ್ರ ಸರ್ಕಾರವು ಮಂಜೂರಾತಿ ನೀಡಿರುತ್ತದೆ. ರಾಜ್ಯ ಸರ್ಕಾರ ಆದೇಶ ಹೊರಡಿಸಿಲ್ಲ.

ಇ) ಕೇಂದ್ರ ಸರ್ಕಾರವು ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕೆಂಪು ಪ್ರಬೇದದ ಅಡಿಕೆಗೆ ಪ್ರತಿ ಕ್ವಿಂಟಾಲ್‌ಗೆ ರೂ. 8.900/–ರ ಬೆಂಬಲ ಬೆಲೆಯಲ್ಲಿ ಖರೀದಿಸಲು ಅನುಮತಿ ನೀಡಿದ್ದು, ಸದರಿ ಮಾರಾಟ ಪ್ರಕ್ರಿಯೆಯಲ್ಲಿ ನಷ್ಟವಾದಲ್ಲಿ ಶೇ.50ರಷ್ಟು ನಷ್ಟವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಮನಾಗಿ ಹಂಚಿಕೊಳ್ಳಲಿವೆ.

896 ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ವರ್ತಕರ ಮೇಲೆ ಎ.ಪಿ.ಎಂ.ಸಿ. ಅಧಿಕಾರಿಗಳು ದೌರ್ಜನ್ಯ ನಡೆಸಿ, ಪ್ರಕರಣವನ್ನು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಕರಣಗಳನ್ನು ಹಿಂದಕ್ಕೆ ಪಡೆಯಲು ಸರ್ಕಾರ ಉದ್ದೇಶಿಸಿದೆಯೇ;

ಇ) ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8ರ ಉಲ್ಲಂಘನೆಗಾಗಿ ದಿ: 29.5.2008ರ ಸಮಿತಿಯ ತೀರ್ಮಾನದ ಮೇರೆಗೆ 40 ಹಾಗೂ ದಿ: 23.3.2009ರಲ್ಲಿ 77 ವರ್ತಕರ ವಿರುದ್ಧ ಸ್ಥಳೀಯ ನ್ಯಾಯಾಲಯದಲ್ಲಿ